ಆ) ಬೈಲಹೊಂಗಲ ತಾಲ್ಲೂಕಿನಲ್ಲಿ ಕೆಂಗಾನೂರು ಗ್ರಾಮದಲ್ಲಿ ಪರಿಶಿಷ್ಟ ಜಾತಿ ಹಾಗೂ ಪಂಗಡದ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯವನ್ನು ಪ್ರಾರಂಭಿಸುವ ಪ್ರಸ್ತಾವನೆ ಬಂದಾಗ ಇತರೆ ಪ್ರಸ್ತಾವನೆಗಳೊಂದಿಗೆ ಆದ್ಯತೆ, ಅವಶ್ಯಕತೆ ಹಾಗೂ ಹಣದ ಲಭ್ಯತೆಯೊಂದಿಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು.

ಬೆಳಗಾವಿ ಜಿಲ್ಲೆ ಮುರ್ಕಿಭಾವಿ ಗ್ರಾಮದಲ್ಲಿ ಬಿ.ಸಿ.ಎಂ. ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯ ಪ್ರಾರಂಭ

1594 (1394) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಮುರ್ಕಿಭಾವಿ ಗ್ರಾಮದಲ್ಲಿ ಸರ್ಕಾರಿ ಪ್ರೌಢಶಾಲೆ ಇರುವ ಸಂಗತಿ ನಿಜವೇ;

ಆ) ಹಾಗಿದ್ದಲ್ಲಿ ಅಲ್ಲಿನ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಬೈಲಹೊಂಗಲ ತಾಲ್ಲೂಕಿನ ಮುರ್ಕಿಭಾವಿ ಗ್ರಾಮದಲ್ಲಿ ಬಿ.ಸಿ.ಎಂ. ಬಾಲಕರ ಮೆಟ್ರಿಕ್ ಪೂರ್ವ ವಸತಿ ನಿಲಯವನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಹೌದು.

ಆ) 2002-2003ನೇ ಸಾಲಿನಲ್ಲಿ ಹೊಸ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸುವ ಪ್ರಸ್ತಾವನೆ ಇರುವುದಿಲ್ಲ.

ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿ

1596 (2045) ಶ್ರೀ ಲಕ್ಷ್ಮೀನಾರಾಯಣ ಎಂ.ಡಿ. (ಅಣ್ಣಯ್ಯ) (ತುರುವೇಕೆರೆ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸರ್ಕಾರದ ಯಾವ ಯಾವ ಇಲಾಖೆಗಳಲ್ಲಿ ಬ್ಯಾಕ್‌ಲಾಗ್ ಹುದ್ದೆಗಳು ಖಾಲಿ ಇವೆ;

ಆ) ಸರ್ಕಾರ ಕಳೆದ 6 ತಿಂಗಳುಗಳಿಂದ ಎಷ್ಟು ಇಲಾಖೆಗಳಲ್ಲಿ ಖಾಲಿ ಇದ್ದ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ (ವಿವರ ನೀಡುವುದು)

ಇ) ಬಾಕಿ ಇರುವ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಈ) ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವಾಗ ಸರ್ಕಾರ ಅನುಸರಿಸುವ ಮಾನದಂಡನೆಗಳೇನು?

ಉ) ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯಲ್ಲಿ ನಿಯಮಗಳನ್ನು ಪಾಲಿಸಿಲ್ಲ ಎಂಬ ದೂರುಗಳ ಬಗ್ಗೆ ಸರ್ಕಾರದ ವಿವರಣೆ ಏನು?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಆ) ಸರ್ಕಾರಿ ಇಲಾಖೆಗಳಲ್ಲಿ ಗುರುತಿಸಲಾಗಿರುವ ಒಟ್ಟು ಬ್ಯಾಕ್‌ಲಾಗ್ ಹುದ್ದೆಗಳು 11843 ಇಲ್ಲಿಯವರೆಗೆ 40 ಸರ್ಕಾರಿ ಇಲಾಖೆಗಳಲ್ಲಿ 3320 ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.